**3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.**

**<u>ಸಿ.ಸಿ.ನಂ. 4111/2023</u>**

**ದಿನಾಂಕಃ 15.05.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು ಃ | ಈಶ್ವರಪ್ಪ | ಚಾಸಾ-3, ಪ್ರಾ.ಸ.-3 |
| ತಂದೆಯ ಹೆಸರು ಃ | ಗಂಗಪ್ಪ | |
| ವಯಸ್ಸು ಃ | 32 ವರ್ಷ | |
| ಉದ್ಯೋಗ ಃ | ಟ್ರ್ಯಾಕ್ಟರ್ ಚಾಲಕ | |
| ವಾಸ ಃ | ಬೀರೂರು | |

<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ</u>

ಚಾಸಾ-2 ಮತ್ತು ಆರೋಪಿ ನನಗೆ ಗೊತ್ತು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ಯಾವುದೇ ಮಾಹಿತಿ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರನ್ನು ಜರುಗಿಸಿರುವುದಿಲ್ಲ ಮತ್ತು ಯಾವುದೇ ವಸ್ತುವನ್ನು ವಶಪಡಿಸಿಕೊಂಡಿರುವುದಿಲ್ಲ. ಸಾಕ್ಷಿಗೆ ನಿಪಿ-1 ಮತ್ತು 3 ನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿ ಇರುವುದನ್ನು ಗುರುತಿಸಿದ್ದು ಅದನ್ನು ನಿಪಿ-1(ಸಿ) ಮತ್ತು 3(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ಎಲ್ಲಿ ಮತ್ತು ಯಾವ ವಿಚಾರವಾಗಿ ಹಾಕಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನನ್ನೊಂದಿಗೆ ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಅದರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಪೋಲಿಸರಿಗೆ ಘಟನೆ ಬಗ್ಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ಸಾಕ್ಷಿಗೆ ನ್ಯಾಯಾಲಯದ ಮುಂದಿರುವ ಮುಮಾ-1 ನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿ ಇರುವುದನ್ನು ನೋಡಿ ಗುರುತಿಸಿದ್ದು, ಸದರಿ ಸಹಿಯನ್ನು ಮುಮಾ-1(ಬಿ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

<u>ಪಾಟೀಸವಾಲುಃ ಮಾನ್ಯ ಸಸಅ. ರವರಿಂದ ಃ</u>

ದಿಃ 06.08.2023 ರಂದು ಸಂಜೆ 7.00 ಗಂಟೆ ಸಮಯದಲ್ಲಿ ನಾನು ಮತ್ತು ಚಾಸಾ-3 ರವರು ಶಿವಾಜಿ ಸರ್ಕಲ್ ನಲ್ಲಿ ನಿಂತಿರುವಾಗ ಚಾಸಾ-1 ರವರು ಅವರ ಸಿಬ್ಬಂದಿಗಳೊಂದಿಗೆ ಬಂದು ನಮ್ಮನ್ನು ಕರೆದು ಪರಿಚಯ ಮಾಡಿಕೊಂಡು ಅಜ್ಜಂಪುರ ರಸ್ತೆಯಲ್ಲಿರುವ ಎ 1 ಚಿಕನ್ ಸೆಂಟರ್ ಪಕ್ಕದಲ್ಲಿರುವ ಮಣ್ಣಿನ ರಸ್ತೆಯಲ್ಲಿ ಒಬ್ಬ ಆಸಾಮಿಯು ಚೀಲದಲ್ಲಿ ಅಕ್ರಮವಾಗಿ ಮದ್ಯವನ್ನು ಹಿಡಿದುಕೊಂಡು ನಿಂತಿರುವ ಬಗ್ಗೆ ಮಾಹಿತಿ ಬಂದಿದ್ದು, ನಾವುಗಳು ದಾಳಿ ಮಾಡಲು ಹೋಗುತ್ತಿದ್ದು, ದಾಳಿ ಸಮಯದಲ್ಲಿ ಪಂಚರಾಗಿ ಸಹಕರಿಸಬೇಕು ಎಂದು ಕೋರಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾವು ಒಪ್ಪಿಕೊಂಡ ಮೇರೆಗೆ ನಿಪಿ-3 ರಂತೆ ನೋಟಿಸನ್ನು ನೀಡಿರುತ್ತಾರೆ ಎಂದರೆ ಸರಿಯಲ್ಲ. ನಾವು ಒಪ್ಪಿದ ಮೇರೆಗೆ ಸಂಜೆ 7.15 ಗಂಟೆಗೆ ಎ 1 ಚಿಕನ್ ಸೆಂಟರ್ ಪಕ್ಕದಲ್ಲಿರುವ ಮಣ್ಣಿನ ರಸ್ತೆಯಲ್ಲಿ ನಾವುಗಳು ಹೋಗಿ ನೋಡಿದಾಗ ಒಬ್ಬ

ಆಸಾಮಿಯು ಒಂದು ಚೀಲವನ್ನು ಹಿಡಿದುಕೊಂಡು ನಿಂತಿದ್ದು, ಸಮವಸ್ತ್ರದಲ್ಲಿದ್ದ ಪೋಲಿಸರನ್ನು ನೋಡಿ ಓಡಿ ಹೋಗಲು ಪ್ರಯತ್ನಪಟ್ಟಿದ್ದನ್ನು ಚಾಸಾ-4 ರವರು ಹಿಡಿದುಕೊಂಡಿದ್ದರು ಎಂದರೆ ಸರಿಯಲ್ಲ. ನಂತರ ಆತನು ಹಿಡಿದುಕೊಂಡಿದ್ದ ಚೀಲವನ್ನು ನಮ್ಮಗಳ ಸಮಕ್ಷಮ ಪರಿಶೀಲಿಸಿ ನೋಡಿದಾಗ ಅದರಲ್ಲಿ ಮದ್ಯದ ಪೌಚುಗಳು ಇದ್ದವು ಎಂದರೆ ಸರಿಯಲ್ಲ. ಆತನ ಹೆಸರು ವಿಳಾಸ ಕೇಳಲಾಗಿ ರಾಜಪ್ಪ ಬೀರೂರು ವಾಸ ಎಂದು ತಿಳಿಸಿರುತ್ತಾನೆ ಎಂದರೆ ಸರಿಯಲ್ಲ. ಆತನ ಬಳಿ ಮದ್ಯ ಮಾರಾಟ ಮಾಡಲು ಪರವಾನಗಿ ಇದೆಯಾ ಎಂದು ವಿಚಾರಿಸಲಾಗಿ ಆತನು ಯಾವುದೇ ಪರವಾನಗಿ ಇಲ್ಲಾ ಹೆಚ್ಚಿನ ಬೆಲೆಗೆ ಮದ್ಯವನ್ನು ಮಾರಾಟ ಮಾಡಲು ಇಟ್ಟುಕೊಂಡಿರುವುದಾಗಿ ತಿಳಿಸಿರುತ್ತಾನೆ ಎಂದರೆ ಸರಿಯಲ್ಲ. ಸದರಿ ಚೀಲವನ್ನು ನಮ್ಮಗಳ ಸಮಕ್ಷಮ ಪರಿಶೀಲಿಸಲಾಗಿ ಅದರಲ್ಲಿ 90 ಎಂಎಲ್ ನ ನಂ1 ಹೈವೈ ಡೀಲಕ್ಸ ಫೈನ್ ವಿಸ್ಕಿ ಎಂದು ಬರೆದಿರುವ 35 ಮದ್ಯದ ಪೌಚುಗಳು ಇದ್ದವು ಎಂದರೆ ಸರಿಯಲ್ಲ. ಇವುಗಳ ಅಂದಾಜು ಬೆಲೆ ರೂ. 979-00 ಆಗಿರುತ್ತದೆ ಎಂದು ನಾವುಗಳು ಅಭಿಪ್ರಾಯಪಟ್ಟಿರುತ್ತೇವೆ ಎಂದರೆ ಸರಿಯಲ್ಲ. ಎಲ್ಲಾ ಮದ್ಯದ ಪೌಚುಗಳನ್ನು ಅದೇ ಚೀಲದಲ್ಲಿ ಹಾಕಿ ಪಿ ಎಂಬ ಅಕ್ಷರದಿಂದ ಸೀಲು ಮಾಡಿ ನಮ್ಮಗಳ ಸಹಿ ಪಡೆದ ಚೀಟಿಯನ್ನು ಅಂಟಿಸಿರುತ್ತಾರೆ ಎಂದರೆ ಸರಿಯಲ್ಲ. ಮಹಜರ್ ನ್ನು 7.15 ರಿಂದ 8.15 ರವರೆಗೆ ವಿದ್ಯುತ್ ಕಂಬದ ಬೆಳಕಿನ ಸಹಾಯದಿಂದ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ನಿಪಿ-2 ರಂತೆ ಛಾಯಾಚಿತ್ರ ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ದಿಃ 06.08.2023 ರಂದು ನಾನು ಈಗ ಓದಿ ಹೇಳಿದಂತೆ ಪೋಲಿಸರಿಗೆ ಹೇಳಿಕೆ ನೀಡಿರುವುದಿಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆ ಭಾಗವನ್ನು ನಿಪಿ-5 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ ಎ ಒ

Sd/-
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ:ದ:ನ್ಯಾ:ದಂ.,ರವರು, ಕಡೂರು.